**RNU AIR DHARWAD**

# JANUARY 25, 2025
# AKASHAVANI - DHARWAD
# REGIONAL NEWS BULLETIN (KANNADA) 07.05 A.M.

**ಮುಖ್ಯಾಂಶಗಳು**

- **ಬೆಂಗಳೂರು ಅರಮನೆ ಮೈದಾನದ ಜಾಗ ಬಳಸಿಕೊಳ್ಳಲು ಸುಗ್ರೀವಾಜ್ಞೆ ಹೊರಡಿಸುವುದರ ಕುರಿತು ರಾಜ್ಯ ಸಚಿವ ಸಂಪುಟದಲ್ಲಿ ನಿರ್ಧಾರ.**
- **ರಾಜ್ಯಾದ್ಯಂತ ಗೃಹ ಆರೋಗ್ಯ ಯೋಜನೆ ವಿಸ್ತರಣೆಗೆ ಚಿಂತನೆ – ಸಚಿವ ದಿನೇಶ್ ಗುಂಡೂರಾವ್.**
- **ಬೆಂಬಲ ಬೆಲೆಯಡಿ ಕಡಲೆಕಾಳು ಖರೀದಿಗೆ ನೋಂದಣಿ ಪ್ರಕ್ರಿಯೆ ಶೀಘ್ರದಲ್ಲೇ ಆರಂಭ – ಸಚಿವ ಶಿವಾನಂದ ಎಸ್. ಪಾಟೀಲ**
- **ಇಂದು ರಾಷ್ಟ್ರೀಯ ಮತದಾರರ ದಿನ.**

**ಈಗ ವಾರ್ತೆಗಳ ವಿವರ**

**ಬೆಂಗಳೂರು ಅರಮನೆ ಮೈದಾನದ** ಜಾಗ ಬಳಸಿಕೊಳ್ಳಲು ಸುಗ್ರೀವಾಜ್ಞೆ ಹೊರಡಿಸುವುದರ ಕುರಿತು ರಾಜ್ಯ ಸಚಿವ ಸಂಪುಟದಲ್ಲಿ ನಿರ್ಣಯ ಕೈಗೊಳ್ಳಲಾಗಿದೆ ಎಂದು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಿರು ಸಾಲ ಕೊಡುವ ಖಾಸಗಿ ಸಂಸ್ಥೆಗಳಾದ ಮೈಕ್ರೋ ಫೈನಾನ್ಸ್ ಕಂಪೆನಿಗಳಿಂದ ಜನರಿಗೆ ಆಗುವ ಅನಾನುಕೂಲತೆಗಳನ್ನು ತಪ್ಪಿಸುವ ಉದ್ದೇಶದಿಂದ ರಾಜ್ಯ ಸರ್ಕಾರ, ಹೊಸ ಕಾನೂನು ಜಾರಿಗೆ ತರುವ ಬಗ್ಗೆ ಚಿಂತನೆ ನಡೆಸಿದೆ. ಈ ಕುರಿತು ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದಲ್ಲಿ ಇಂದು ಸಭೆ ಕರೆಯಲಾಗಿದೆ ಎಂದರು.

**ಧ್ವನಿ: ಸಚಿವ ಎಚ್ ಕೆ ಪಾಟೀಲ್ ( 32 ಸೆಕೆಂದುಗಳು)**

<><><>

**ಗ್ರಾಮೀಣ ಜನರ ಆರೋಗ್ಯ ಸುಧಾರಿಸುವ ಹಾಗೂ** ಸಾಂಕ್ರಾಮಿಕವಲ್ಲದ ರೋಗಗಳನ್ನು ನಿಯಂತ್ರಿಸುವ ಗುರಿಯನ್ನು ಗೃಹ ಆರೋಗ್ಯ ಯೋಜನೆ ಹೊಂದಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಕೋಲಾರದಲ್ಲಿ ಆಯೋಜಿಸಲಾಗಿದ್ದ, ಗೃಹ ಆರೋಗ್ಯ ಯೋಜನೆಯ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೋಲಾರ ಜಿಲ್ಲೆಯಲ್ಲಿ ಕಳೆದ ಅಕ್ಟೋಬರ್ 29 ರಂದು ಈ ಯೋಜನೆಗೆ ಅಧಿಕೃತವಾಗಿ ಚಾಲನೆ ನೀಡಿದ್ದು, ಈ ಯೋಜನೆಯ ಸಾಧಕ–ಭಾದಕ ಗಳನ್ನು ಪರಿಶೀಲಿಸಿ ಮುಂಬರುವ ದಿನಗಳಲ್ಲಿ ರಾಜ್ಯಾದ್ಯಂತ ಜಾರಿಗೆ ತರಲು ಯೋಜಿಸಲಾಗಿದೆ ಎಂದು ತಿಳಿಸಿದರು. ಗ್ರಾಮೀಣ ಸಮುದಾಯಗಳು ರಕ್ತದೊತ್ತಡ ಮತ್ತು ಮಧುಮೇಹ ತಪಾಸಣೆಯನ್ನು ನಿರ್ಲಕ್ಷಿಸುತ್ತಿದ್ದು, ಆರೋಗ್ಯ ಇಲಾಖೆ ಅಧಿಕಾರಿಗಳನ್ನು ಮನೆಗೆ ಭೇಟಿ ನೀಡಲು ಕಳುಹಿಸಲಾಗುತ್ತದೆ. ಆಶಾ ಕಾರ್ಯಕರ್ತರು ಮತ್ತು ಆರೋಗ್ಯ ಸಿಬ್ಬಂದಿ 30 ವರ್ಷಕ್ಕಿಂತ ಮೇಲ್ಪಟ್ಟವರ, ರಕ್ತದೊತ್ತಡ ಮತ್ತು ಮಧುಮೇಹದ ಮಟ್ಟವನ್ನು ಪರಿಶೀಲಿಸುತ್ತಾರೆ ಎಂದರು.

<><><>

**ಬೆಂಬಲ ಬೆಲೆಯಡಿ ಕಡಲೆಕಾಳು** ಖರೀದಿಸಲು ಒಂದು ವಾರದೊಳಗೆ ನೋಂದಣಿ ಪ್ರಕ್ರಿಯೆ ಆರಂಭಿಸಲಾಗುವುದು ಎಂದು ಕೃಷಿ ಮಾರುಕಟ್ಟೆ ಖಾತೆ ಸಚಿವ ಶಿವಾನಂದ ಎಸ್. ಪಾಟೀಲ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆಯ ಮೂಲಕ ಮಾಹಿತಿ

ನೀಡಿರುವ ಅವರು, ಧಾರವಾಡ, ಗದಗ, ಬೆಳಗಾವಿ, ವಿಜಯಪುರ, ಕಲಬುರಗಿ, ಯಾದಗಿರಿ, ಬೀದರ್, ರಾಯಚೂರು, ಕೊಪ್ಪಳ, ಬಳ್ಳಾರಿ, ಚಿತ್ರದುರ್ಗ, ಬಾಗಲಕೋಟೆ, ದಾವಣಗೆರೆ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಖರೀದಿ ಕೇಂದ್ರಗಳನ್ನು ಆರಂಭಿಸಲಾಗುವುದು ಎಂದು ತಿಳಿಸಿದ್ದಾರೆ.

<><><>

**ಕೇಂದ್ರ ಸರ್ಕಾರದ ರಕ್ಷಣಾ** ಇಲಾಖೆ ವಿದ್ಯಾರ್ಥಿಗಳಲ್ಲಿ ರಾಷ್ಟ್ರಪ್ರೇಮ ಮೂಡಿಸುವ ನಿಟ್ಟಿನಲ್ಲಿ ಆಯೋಜಿಸಿದ್ದ ವೀರಗಾಥಾ ಸ್ಪರ್ಧೆಯಲ್ಲಿ, ಸ್ವಾತಂತ್ರ್ಯ ಹೋರಾಟಗಾರ್ತಿ ಝಾನ್ಸಿ ರಾಣಿ ಲಕ್ಷ್ಮೀಬಾಯಿ ಕುರಿತು ಆಂಗ್ಲ ಭಾಷೆಯಲ್ಲಿ ಕವನ ರಚಿಸಿ ಧಾರವಾಡ ಜಿಲ್ಲೆ ಹುಬ್ಬಳ್ಳಿಯ, ಚಿನ್ಮಯ ಶಾಲೆಯ 9 ನೇ ತರಗತಿ ವಿದ್ಯಾರ್ಥಿನಿ ಸಾಕ್ಷಿ ಕುಲಕರ್ಣಿ. ಪ್ರಶಸ್ತಿಗೆ ಭಾಜನರಾಗಿದ್ದಾರೆ. ರಾಜ್ಯದಿಂದ ಆಯ್ಕೆಯಾದ ಒಟ್ಟು 7 ವಿದ್ಯಾರ್ಥಿಗಳಲ್ಲಿ ಓರ್ವರಾಗಿರುವ ಇವರು ನಾಳೆ ಗಣರಾಜ್ಯೋತ್ಸವ ದಿನದಂದು ರಾಷ್ಟ್ರಪತಿಯವರಿಂದ ಪ್ರಶಸ್ತಿ ಸ್ವೀಕರಿಸಲಿದ್ದಾರೆ. ವಿಶೇಷ ಸಾಧನೆ ಮಾಡಿರುವ ಅವರು ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ : ಸಾಕ್ಷಿ ಕುಲಕರ್ಣಿ ( 29 ಸೆಕೆಂಡುಗಳು)**

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..**

<><><>

**ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ X ಖಾತೆ @airnews_dharwad ಹಾಗೂ**

**ನಮ್ಮ ಫೇಸ್ಬುಕ್ ಖಾತೆ Airrnu Dharwad ಅನುಸರಿಸಿ.**

<><><>

**2011 ರಿಂದ ಪ್ರತಿ ವರ್ಷ ಜನವರಿ 25** ರಂದು ದೇಶದಾದ್ಯಂತ ರಾಷ್ಟ್ರೀಯ ಮತದಾರರ ದಿನವನ್ನಾಗಿ ಆಚರಿಸಲಾಗುತ್ತದೆ. ರಾಜ್ಯದಲ್ಲಿ ಮತಗಟ್ಟೆ ಮಟ್ಟದಿಂದ ರಾಜ್ಯಮಟ್ಟದವರೆಗೆ ಈ ದಿನವನ್ನು ಆಚರಿಸಲಾಗುತ್ತದೆ. ರಾಷ್ಟ್ರೀಯ ಮತದಾರರ ದಿನದ ಆಚರಣೆಯ ಮುಖ್ಯ ಉದ್ದೇಶ, ನಾಗರಿಕರಲ್ಲಿ ಚುನಾವಣಾ ಜಾಗೃತಿಯನ್ನು ಮೂಡಿಸುವುದು ಮತ್ತು ಚುನಾವಣಾ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವರನ್ನು ಪ್ರೋತ್ಸಾಹಿಸುವುದಾಗಿದೆ. ರಾಜ್ಯಪಾಲ ಥಾವರ್‌ಚಂದ್ ಗೆಹೋಟ್ ಬೆಂಗಳೂರಿನ ಸರ್. ಪುಟ್ಟಣ್ಣ ಚೆಟ್ಟಿ ಟೌನ್ ಹಾಲ್ನಲ್ಲಿ ಆಯೋಜಿಸಿರುವ ರಾಜ್ಯಮಟ್ಟದ ಸಮಾರಂಭದಲ್ಲಿ ಇಂದು ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸುವ ಮುಖಾಂತರ ಅರ್ಹ ಮತದಾರರಿಗೆ ನೋಂದಣಿ ಮಾಡಿಕೊಳ್ಳಲು ಪ್ರೋತ್ಸಾಹಿಸಲಾಗುತ್ತದೆ. ಈ ಕಾರ್ಯಕ್ರಮದಲ್ಲಿ ಹೊಸ ಮತದಾರರಿಗೆ ಅಭಿನಂದಿಸಿ ಗುರುತಿನ ಚೀಟಿಯನ್ನು ನೀಡಲಾಗುವುದು. ಸಮಾರಂಭದಲ್ಲಿ ಭಾಗವಹಿಸುವ ಎಲ್ಲರಿಗೂ ಮತದಾರರ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಗುವುದು. ಈ ಸಂದರ್ಭದಲ್ಲಿ, ರಾಜ್ಯಪಾಲರು 2024 ನೇ ಸಾಲಿನಲ್ಲಿ ವಿವಿಧ ಚುನಾವಣಾ ಪ್ರಕ್ರಿಯೆಗಳಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಜಿಲ್ಲಾ ಚುನಾವಣಾ ಅಧಿಕಾರಿಗಳು ಹಾಗೂ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿಗಳು. ಮತದಾರರ ನೋಂದಣಾಧಿಕಾರಿಗಳು, ಬೂತ್ ಮಟ್ಟದ ಅಧಿಕಾರಿಗಳು, ಮತದಾರರ ಸಾಕ್ಷರತಾ ಸಂಘಗಳು ಹಾಗೂ ರಾಷ್ಟ್ರೀಯ ಮತ್ತು ರಾಜ್ಯಮಟ್ಟದ ಸಂಪನ್ಮೂಲ ವ್ಯಕ್ತಿಗಳಿಗೆ ಪ್ರಶಸ್ತಿ ಪ್ರದಾನ ಮಾಡುವರು.

<><><>

**ಕರ್ನಾಟಕ ಮುಖ್ಯ ಚುನಾವಣಾ** ಕಚೇರಿಯಿಂದ ಇತ್ತೀಚೆಗೆ ನಡೆದ ಚುನಾವಣೆಗಳಿಗೆ ಸಂಬಂಧಿಸಿದಂತೆ, ಚುನಾವಣಾ ಕಾರ್ಯದಲ್ಲಿ ಅತ್ಯುತ್ತಮ ಕಾರ್ಯ ನಿರ್ವಹಿಸಿರುವುದಕ್ಕಾಗಿ ಅವರ ಸಾಧನೆಗಳನ್ನು ಗುರುತಿಸಿ 2024–25ನೇ ಸಾಲಿನ ರಾಜ್ಯ ಅತ್ಯುತ್ತಮ ಚುನಾವಣಾ ಕಾರ್ಯ ಪ್ರಶಸ್ತಿ ಪ್ರಕಟಿಸಿದೆ. ಜಿಲ್ಲಾ ಚುನಾವಣಾಧಿಕಾರಿಗಳ ವಿಭಾಗದಿಂದ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ರಾಮನಗರದ ಡಾಕ್ಟರ್ ಅವಿನಾಶ್ ಮೆನೊನ್ ರಾಜೇಂದ್ರನ್, ಮಂಡ್ಯದ ಡಾಕ್ಟರ್ ಕುಮಾರ, ಬಾಗಲಕೋಟೆಯ ಕೆ.ಎಂ.ಜಾನಕಿ ಹಾಗೂ ಯಾದಗಿರಿಯ ಡಾಕ್ಟರ್ ಸುಶೀಲಾ ಬಿ, ಆಯ್ಕೆಯಾಗಿದ್ದಾರೆ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ವಿಭಾಗದಿಂದ ಅತ್ಯುತ್ತಮ ಕಾರ್ಯನಿರ್ವಹಿಸಿದ ರಾಮನಗರದ ದಿಗ್ವಿಜಯ್ ಬೋಡ್ಕೆ,

ಚಿಕ್ಕಮಗಳೂರಿನ ಡಾಕ್ಟರ್ ಗೋಪಾಲ್ ಕೃಷ್ಣ. ಬಿ, ಬೀದರಿನ ಡಾಕ್ಟರ್ ಗಿರೀಶ್, ದಿಲೀಪ್ ಬಡೋಲೆ ಆಯ್ಕೆಯಾಗಿದ್ದಾರೆ. ಪ್ರಶಸ್ತಿಗೆ ಭಾಜನರಾದ ಹಾವೇರಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಕ್ಷಯ್ ಶ್ರೀಧರ್ ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ– ಅಕ್ಷಯ್ ಶ್ರೀಧರ್( 50 ಸೆಕೆಂದುಗಳು)**

<><><>

**ಧಾರವಾಡ**ದ ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಹಾಗೂ ಉತ್ತರ ಕನ್ನಡ **ಜಿಲ್ಲಾಡಳಿತ ವತಿಯಿಂದ** 15ನೇ ರಾಷ್ಟ್ರೀಯ ಮತದಾರರ ದಿನಾಚರಣೆ ಕಾಯಕ್ರಮ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ನಡೆಯಲಿದೆ. **ದಾವಣಗೆರೆಯಲ್ಲಿ** ಪ್ರಧಾನ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷೆ ರಾಜೇಶ್ವರಿ.ಎನ್ ಹೆಗಡೆ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ತಿಳಿಸಿದ್ದಾರೆ. **ರಾಮನಗರ ಜಿಲ್ಲಾಡಳಿತ**ದ ವತಿಯಿಂದ ಜಿಲ್ಲಾಧಿಕಾರಿಯವರ ಕಚೇರಿ ಸಂಕೀರ್ಣದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ರಾಷ್ಟ್ರೀಯ ಮತದಾರರ ದಿನಾಚರಣೆಯ ಅಂಗವಾಗಿ ಪ್ರತಿಜ್ಞಾ ವಿಧಿ ಬೋಧಿಸಿದರು. **ಭಾರತ ಚುನಾವಣಾ** ಆಯೋಗದಿಂದ ನಡೆದ ಚುನಾವಣೆಗಳಿಗೆ ಸಂಬಂಧಿಸಿದಂತೆ ಚುನಾವಣಾ ಕಾರ್ಯದಲ್ಲಿ ಅತ್ಯುತ್ತಮ ಕಾರ್ಯ ನಿರ್ವಹಿಸಿದ **ಕಲಬುರ್ಗಿಯ** ಜಿಲ್ಲಾ ಚುನಾವಣಾಧಿಕಾರಿ ಫೌಜಿಯಾ ತರನ್ನುಮ್ 2024–25ನೇ ಸಾಲಿನ ಅತ್ಯುತ್ತಮ ಚುನಾವಣಾ ಅಭ್ಯಾಸಗಳ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಇಂದು ನವದೆಹಲಿಯಲ್ಲಿ ರಾಷ್ಟ್ರೀಯ ಮತದಾನ ದಿನದ ಅಂಗವಾಗಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಭಾರತ ಚುನಾವಣಾ ಆಯೋಗದ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

**2025ರ ಪುರುಷರ ಹಾಗೂ ಮಹಿಳಾ ಖೋ** ಖೋ ವಿಶ್ವಕಪ್‌ನಲ್ಲಿ ಅತ್ಯುತ್ತಮ ಆಟವಾಡಿ, ಭಾರತ ತಂಡವು ಎರಡೂ ವಿಭಾಗದಲ್ಲಿ ವಿಶ್ವ ಚಾಂಪಿಯನ್ ಆಗಲು ಪ್ರಮುಖ ಪಾತ್ರ ವಹಿಸಿದ ಮಂಡ್ಯ ಜಿಲ್ಲೆಯ ಡಿ.ಮಲ್ಲಿಗೆರೆ ಗ್ರಾಮದ ಎಂ.ಕೆ ಗೌತಮ್ ಹಾಗೂ ಮೈಸೂರು ಜಿಲ್ಲೆಯ ಟಿ.ನರಸೀಪುರದ ಕುರಬೂರಿನ ಚೈತ್ರಾ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸನ್ಮಾನಿಸಿ, ಇಬ್ಬರಿಗೂ ತಲಾ 5 ಲಕ್ಷ ರೂಪಾಯಿಯ ಬಹುಮಾನ ಘೋಷಿಸಿ, ಕ್ರೀಡಾ ಬದುಕು ಮತ್ತಷ್ಟು ಯಶಸ್ಸುಗಳಿಂದ ಕೂಡಿರಲಿ ಎಂದು ಶುಭ ಕೋರಿದ್ದಾರೆ.

<><><>

**ಈಗ ಸಂಕ್ಷಿಪ್ತ ಸುದ್ದಿಗಳು**

**ಧಾರವಾಡ ಜಿಲ್ಲಾ ಉಸ್ತುವಾರಿ** ಸಚಿವ ಸಂತೋಷ ಎಸ್. ಲಾಡ್ ಇಂದಿನಿಂದ 4 ದಿನಗಳ ಕಾಲ ಧಾರವಾಡ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

<><><>

**ಈ ಬಾರಿಯ ಎಸ್.ಎಸ್.ಎಲ್.ಸಿ** ಫಲಿತಾಂಶದಲ್ಲಿ ಉತ್ತರಕನ್ನಡ ಜಿಲ್ಲೆಯ ಎಲ್ಲಾ ಸರಕಾರಿ ಶಾಲೆಗಳಲ್ಲಿ ಶೇಕಡ 100 ರಷ್ಟು ಫಲಿತಾಂಶ ದಾಖಲಿಸುವುದರ ಜೊತೆಗೆ ಜಿಲ್ಲೆಯ ಯಾವುದೇ ವಿದ್ಯಾರ್ಥಿ ಅನುತ್ತೀರ್ಣರಾಗದಂತೆ ಸಂಬಂಧಪಟ್ಟ ಶಾಲೆಗಳ ಮುಖ್ಯೋಪಾಧ್ಯಾಯರು, ಶಿಕ್ಷಕರು ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳು ಜವಾಬ್ದಾರಿ ವಹಿಸಿಕೊಳ್ಳಬೇಕು ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ಸೂಚಿಸಿದ್ದಾರೆ.

<><><>